**ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು**

**ಸಿ.ಸಿ ನಂ.1187/2021**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ನಾಗರಾಜು | ಸಿಡಬ್ಲ್ಯೂ-3 |
| ತಂದೆಯ ಹೆಸರು | - | ಕಂಬಣ್ಣ | ಪಿಡಬ್ಲ್ಯೂ-2 |
| ವಯಸ್ಸು | - | 37 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸ | - | ಕೆ ಕೆ ಹಟ್ಟಿ ಗ್ರಾಮ | |

**ದಿನಾಂಕಃ21.02.2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ಚಾಸಾ.1, 2 ನನಗೆ ಗೊತ್ತಿಲ್ಲ. ಮೃತ ಜಂದಲಿ ವೀರಪ್ಪ ನನಗೆ ಗೊತ್ತು. ಸದರಿ ಈರಪ್ಪ ರಸ್ತೆ ಅಪಘಾತದಲ್ಲಿ ಮೃತ ಪಟ್ಟಿದ್ದಾನೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಆದರೆ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ಒಂದು ದೂರನ್ನು ಬರೆಯಲು ಹೇಳಿದ್ದು ಅದರಂತೆ ಬರೆದಿದ್ದೇನೆ. ಸದರಿ ದೂರು ಬರೆಯಲು ಪೊಲೀಸರೇ ಮಾಹಿತಿ ಕೊಟ್ಟಿದ್ದಾರೆ. ಈ ಪ್ರಕರಣದಲ್ಲಿ ಪೊಲೀಸರು ನನಗೆ ವಿಚಾರಿಸಿಲ್ಲ ಯಾವುದೇ ಹೇಳಿಕೆ ಮಾಡಿಕೊಂಡಿಲ್ಲ. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಅಂದಾಜು 3 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ನಿಪಿ-1 ಕ್ಕೆ ಸಹಿ ಮಾಡಿದ್ದೇನೆ. ಸದರಿ ದೂರು ಯಾವ ವಿಚಾರಕ್ಕೆ ಬರೆದಿದ್ದೇನೆ ಎಂದು ಗೊತ್ತಿಲ್ಲ. ಆದರೆ ಪೊಲೀಸರು ಹೇಳಿದಂತೆ ದೂರು ತಯಾರಿಸಿದ್ದೇನೆ.

ಸಾಕ್ಷಿಗೆ ಒಂದು ಶವತನಿಖಾ ಪಂಚನಾಮೆ ತೋರಿಸಲಾಗಿ ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದರಿಂದ ದಾಖಲೆಯನ್ನು ನಿಪಿ-10 ಎಂದು ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಗೂ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಆದರೆ

ಯಾವ ಕಾರಣಕ್ಕೆ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಕ್ರಮ ಜರುಗಿಸಿಲ್ಲ ನಿಪಿ-10 ಕ್ಕೆ ಮೂರು ವರ್ಷಗಳ ಹಿಂದೆ ಪೊಲೀಸರು ನನ್ನ ಸಹಿ ಪಡೆದಿದ್ದಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ದಿಃ02.10.2020 ರಂದು ರಾತ್ರಿ 8.15 ಗಂಟೆಗೆ ಜಂದಲಿ ಈರಪ್ಪ ರಸ್ತೆ ಅಪಘಾತದಲ್ಲಿ ಗಾಯಗೊಂಡಿದ್ದು ಚಿಕಿತ್ಸೆಗಾಗಿ ಹಿರಿಯೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದರು ಎಂದರೆ ನಿಜ. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಗೆ ಕರೆದುಕೊಂಡು ಹೋದರು ಎಂದರೆ ನಿಜ. ಸದರಿ ಘಟನೆ ಬಗ್ಗೆ ಈಗ ನನಗೆ ಓದಿ ಹೇಳಿದ ನಿಪಿ-1 ರಂತೆ ಮೃತ ಜಂದಲಿ ಈರಪ್ಪನ ಮಗ ಶಿವಕುಮಾರ್ ಮಾಹಿತಿ ಕೊಟ್ಟಂತೆ ದೂರ ಬರೆದು ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಸದರಿ ದೂರು ಬರೆಯಲು ಪೊಲೀಸರು ಮಾಹಿತಿ ಕೊಟ್ಟಿದ್ದಾರೆ ಎಂದು ಹೇಳುತ್ತಾರೆ. ಸದರಿ ಜಂದಲಿ ಈರಪ್ಪನು ಚಿತ್ರದುರ್ಗದ ಆಸ್ಪತ್ರೆಯಲ್ಲಿ ಗುಣಮುಖನಾಗದೇ ಬಿಡುಗಡೆ ಹೊಂದಿ ಮನೆಯಲ್ಲಿ ಇರುವಾಗ ದಿಃ24.10.2020 ರಂದು ಮೃತ ಪಟ್ಟಿದ್ದಾನೆ ಎಂದರೆ ಗೊತ್ತಿಲ್ಲ. ಸದರಿ ಜಂದಿಲಿ ಈರಪ್ಪನ ಮೃತ ದೇಹ ಶವ ತನಿಖೆ ಮಾಡಲು ಹಿರಿಯೂರು ಸರ್ಕಾರಿ ಆಸಪತ್ರೆಗೆ ಕರೆದುಕೊಂಡು ಹೋಗಿದ್ದು ಆಗ ತನಿಖಾಧಿಕಾರಿ ನಿಪಿ-10 ರಂತೆ ದಾಖಲೆ ತಯಾರಿಸಿ ಆಸ್ಪತ್ರೆಯಲ್ಲಿ ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಸದರಿ ವಿಷಯದ ಬಗ್ಗೆ ಈಗ ನನಗೆ ಓದಿ ಹೇಳಿದ ನಿಪಿ-11 ರಂತೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣದ ಬಗ್ಗೆ ನನಗೆ ಎಲ್ಲಾ ಮಾಹಿತಿ ಇದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಬಿ ಕೆ ವಕೀಲರಿಂದ–ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು